# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಲಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 84 | Pages. 2 | Date: 01-03-2026, SUNDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 84 - ಪುಟಗಳು : 2 | 01-03-2026 | ಭಾನುವಾರ | Ph: 8762954248 | ದರ : ₹1


# ಸೂಚನೆಗೂ ಕಿವಿಗೊಡದೆ ಮೋಸ ಮುಂದುವರಿಕೆ

## ರಾಗಿ ತೂಕದಲ್ಲಿ ಕಳ್ಳಾಟ | ಡಿಸಿ ಕಚೇರಿ ಎದುರು ಪ್ರತಿಭಟನೆ ಎಚ್ಚರಿಕೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಬೆಂಬಲ ಬೆಲೆಯಡಿ ರಾಗಿ ಖರೀದಿ ಪ್ರಕ್ರಿಯೆಯಲ್ಲಿ ರೈತರಿಗೆ ಮೋಸ ಮಾಡಬಾರದೆಂದು ಶಾಸಕ ಎ.ಮಂಜು, ತಹಶೀಲ್ದಾರ್ ಕೆ.ಸಿ.ಸೌಮ್ಯ ನಿರಂತರ ಸೂಚನೆ ನೀಡಿದ್ದರೂ ಶನಿವಾರ ಸಹ ಅಧಿಕಾರಿಗಳ ಕಳ್ಳಾಟ ಮುಂದುವರಿದಿದೆ.

ನಿರಂತರ ಮೋಸಕ್ಕೆ ಬೇಸತ್ತಿರುವ ರೈತ ಮುಖಂಡರು ಸೋಮವಾರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲು ನಿರ್ಧರಿಸಿದ್ದಾರೆ. ಪಟ್ಟಣದ ಎಪಿಎಂಸಿ ಮತು ರಾಮನಾಥಪುರದ ರಾಗಿ ಖರೀದಿ ಕೇಂದ್ರಗಳಲ್ಲಿ ರಾಗಿ ಕಳ್ಳತನ ಮೋಸದಾಟ ಮುಂದುವರಿದಿದೆ.

ನಾಲ್ಕನೇ ಶನಿವಾರ ಸರ್ಕಾರಿ ರಜೆ ದಿನವನ್ನು ಲಾಭ ಮಾಡಿಕೊಳ್ಳುವ ಸಲುವಾಗಿ ರಾಗಿ ಖರೀದಿ ಕೇಂದ್ರಗಳ ಅಧಿಕಾರಿ, ಮಧ್ಯವರ್ತಿಗಳು, ವರ್ತಕರು ಅನಧಿಕೃತವಾಗಿ ರಾಗಿಯನ್ನು ತಂದು ನಕಲಿ ರೈತರ ಹೆಸರಿನಲ್ಲಿ ಬಿಡಲು ಸಿದ್ಧತೆ ನಡೆಸಿದ್ದರು. ಅದನ್ನು ಕಂಡು ಪಟ್ಟಣದ ರಾಗಿ ಖರೀದಿ ಕೇಂದ್ರಕ್ಕೆ ಆಗಮಿಸಿದ ರೈತ ಸಂಘಟನೆಗಳ ಮುಖಂಡರು ಯಾವುದೇ ಎಫ್‌ಐಡಿ ಇಲ್ಲದೆ 55 ಚೀಲ ರಾಗಿಯನ್ನು ಲಾರಿಗೆ ತುಂಬಿರುವುದನ್ನು ಪತ್ತೆಹಚ್ಚಿ ಪ್ರತಿಭಟಿಸಿದರು.

### ವಿಕೋಪಕ್ಕೆ ತಿರುಗಿದ ಪರಿಸ್ಥಿತಿ

ರಾಗಿ ಖರೀದಿ ಅಧಿಕಾರಿಗಳ ಬೆಂಬಲಿಗರು, ರೈತರ ಹೆಸರಿನಲ್ಲಿ ಬಂದಿದ್ದ ದಲ್ಲಾಳಿಗಳು ಹಾಗು ಚೀಲ ತುಂಬುವ ಹಮಾಲಿಗಳ ನಡುವೆ ಮಾತಿನ ಚಕಮಕಿ ನಡೆದುದಲ್ಲದೇ ಕೈ ಕೈ ಮಿಲಾಯಿಸುವ ಹಂತಕ್ಕೆ ತಲುಪಿತು. ವಿಷಯ ತಿಳಿದು ರಜೆಯಲ್ಲಿದ್ದ ತಹಶೀಲ್ದಾರ್ ಕೆ.ಸಿ.ಸೌಮ್ಯ ಅವರು ತನ್ನ ಹಸೂಗೂಸಿನೊಂದಿಗೆ ಆಗಮಿಸಿ ರೈತರ ಸಮಸ್ಯೆ ಆಲಿಸಿದರು. ಈ ಸಂದರ್ಭದಲ್ಲಿಯೂ ಕೂಡ ರೈತ ಸಂಘಟನೆ ಸದಸ್ಯರ ಮೇಲೆ ಬಾಡಿಗೆ ದಲ್ಲಾಳಿಗಳು ಏಕವಚನದಿಂದ ನಿಂದಿಸಲು ಆರಂಭಿಸಿದರು. ಇವರೆಲ್ಲರೂ ರಾಗಿ ಬಿಡಲು ಬಂದ ರೈತರಾಗಿರಲಿಲ್ಲ. ಬದಲಾಗಿ ಖರೀದಿ ಅಧಿಕಾರಿಗಳ ಬೆಂಬಲಿಗರು ಎಂಬುದು ಕಂಡುಬಂದಿತು.

## ತಪ್ಪಿತಸ್ಥರ ವಿರುದ್ಧ ಕ್ರಮವಿಲ್ಲ: ಆಕ್ರೋಶ

ಅರಕಲಗೂಡು ಮತ್ತು ರಾಮನಾಥಪುರ ರಾಗಿ ಖರೀದಿ ಕೇಂದ್ರದಲ್ಲಿನ ಖರೀದಿ ಅಧಿಕಾರಿಗಳ ಕುಮ್ಮಕ್ಕಿನಿಂದಲೇ ಈ ರೀತಿಯಾಗಿ ರೈತರನ್ನು ವಂಚಿಸಲಾಗುತ್ತಿದೆ. ಕಳೆದ ಮೂರು ದಿನಗಳಿಂದಲೂ ರೈತ ಸಂಘ ಪತ್ತೆ ಹಚ್ಚಿರುವ ಕಳ್ಳತನದ ರಾಗಿಯನ್ನು ಇದುವರೆಗೂ ಮುಟ್ಟುಗೋಲು ಹಾಕಿಕೊಂಡಿಲ್ಲ. ಬದಲಾಗಿ ಇಂದು ಈ ರೀತಿಯಾಗಿ ಕಳ್ಳತನ ಮಾಡಿರುವ 55 ಚೀಲಕ್ಕೂ ಅಧಿಕ ರಾಗಿಯನ್ನು ಲಾರಿಗೆ ತುಂಬಲಾಗಿದೆ. ಇದು ಯಾವ ರೈತನಿಗೆ ಸೇರಿದ ರಾಗಿ ಎಂಬುದನ್ನು ಸಾಬೀತುಪಡಿಸಿ ಎಂದರೆ ನಮ್ಮ ಮೇಲೆ ದರ್ಪ ತೋರಲಾಗುತ್ತಿದೆ. ಇಲ್ಲಿ ಅಧಿಕಾರಿಗಳ ಬದಲಿಗೆ ಬಾಡಿಗೆ ದಲ್ಲಾಳಿಗಳು, ರೈತರಲ್ಲದವರು ದಬ್ಬಾಳಿಕೆ ಮಾಡುತ್ತಿದ್ದಾರೆ. ಪ್ರಮುಖವಾಗಿ ರಾಗಿ ತುಂಬುವ ಕೆಲಸಗಾರರು ಕೂಡ ನಮ್ಮ ಮೇಲೆ ಗಲಾಟೆಗೆ ಬರುತ್ತಾರೆ. ರೈತರಿಂದ ಅಕ್ರಮವಾಗಿ ರಾಗಿ ಎತ್ತುವಳಿ ಮಾಡಲು ಮಧ್ಯವರ್ತಿಗಳು, ಚೀಲ ತುಂಬುವರಿಂದಲೇ ನಡೆಯುತ್ತಿದೆ. ಇದನ್ನು ನಿಯಂತ್ರಿಸಿದರೇ ಸುಗಮವಾಗಿ ರೈತರ ರಾಗಿ ಖರೀದಿ ನಡೆಯುತ್ತದೆ. ಈ ದೌರ್ಜನ್ಯ ಸರಿಪಡಿಸದಿದ್ದರೇ ಸೋಮವಾರದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ಮಾಡಬೇಕಾಗುತ್ತದೆಂದು ರೈತ ಸಂಘದ ಅಧ್ಯಕ್ಷ ಭುವನೇಶ್ ಎಚ್ಚರಿಸಿದರು.

ನೋಡ್ರಿ, ಇಂದು ರಾಗಿ ಖರೀದಿ ಕೇಂದ್ರದ ಅಧಿಕಾರಿ ಇಲ್ಲ. ಬೇರೆಯವರನ್ನು ಬಿಟ್ಟು ಹೋಗಿದ್ದಾರೆ. ಅಲ್ಲದೆ ಇಂದು ರಜೆ ದಿನವಾಗಿರುವ ಹಿನ್ನಲೆ ಸಂಬಂಧಪಟ್ಟ ಇಲಾಖೆಯವರನ್ನು ಸಂಪರ್ಕಿಸಲು ಸಾಧ್ಯವಾಗುತ್ತಿಲ್ಲ. ಸೋಮವಾರ ಅಧಿಕಾರಿಗಳನ್ನು ಕರೆಯಿಸಿ ಸಮಸ್ಯೆ ನಿವಾರಣೆ ಮಾಡಲಾಗುವುದು. ರೈತ ಸಂಘಟನೆಯವರು ಅಕ್ರಮ ರಾಗಿ, ಅಧಿಕೃತವಲ್ಲದ ರೈತರಿಂದ ವರ್ತಕರು ಈ ರೀತಿ ಹೆಚ್ಚುವರಿಯಾಗಿ ರಾಗಿ ಕಳ್ಳತನ ಮಾಡುತ್ತಿದ್ದಾರೆ ಎಂಬುದು ಅವರ ಆರೋಪವಾಗಿದೆ. ಇಲ್ಲಿ ನಿಜವಾಗಿ ರಾಗಿ ಮಾರುವ ರೈತರು, ಅಧಿಕಾರಿಗಳ ಮಾಹಿತಿಯನ್ನು ಮಾತ್ರ ಪಡೆಯಲಾಗುವುದು. ಇತರರು ಮಾತನಾಡುವ ಅಗತ್ಯವಿಲ್ಲ ಎಂದು ತಹಶೀಲ್ದಾರ್ ಎಚ್ಚರಿಕೆ ನೀಡಿದರು.

### ಮಗುವಿನೊಂದಿಗೆ ತಹಶೀಲ್ದಾರ್ ಹಾಜರು

ರೈತರ ಸಂಕಷ್ಟಕ್ಕೆ ಸ್ಪಂದಿಸಲು ತಮ್ಮ ಪುಟ್ಟ ಕಂದಮ್ಮನನ್ನು ಎತ್ತಿಕೊಂಡೇ ಸ್ಥಳಕ್ಕೆ ಆಗಮಿಸುವ ಮೂಲಕ ತಹಸೀಲ್ದಾರ್ ಕೆ.ಸಿ. ಸೌಮ್ಯ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಜಿಲ್ಲೆಯಲ್ಲಿ ಬೆಂಬಲ ಬೆಲೆಯಡಿ ರಾಗಿ ಖರೀದಿ ಪ್ರಕ್ರಿಯೆ ನಡೆಯುತ್ತಿದೆ. ಆದರೆ, ರಾಗಿ ತೂಕ ಮಾಡುವಾಗ ಅಧಿಕಾರಿಗಳು ಹಾಗು ಸಿಬ್ಬಂದಿ ಮೋಸ ಮಾಡುತ್ತಿದ್ದಾರೆಂದು ರೈತರು ಆಕ್ರೋಶ ವ್ಯಕ್ತಪಡಿಸಿದ್ದರು. ಈ ಗೊಂದಲ ಬಗೆಹರಿಸುವಂತೆ ರೈತರು ಒತ್ತಾಯಿಸಿದ ಹಿನ್ನಲೆಯಲ್ಲಿ ತಹಶೀಲ್ದಾರ್ ಸೌಮ್ಯ ಅವರು ತಡಮಾಡದೆ ಸ್ಥಳಕ್ಕೆ ಭೇಟಿ ನೀಡಿದರು.

## ಅಪಘಾತ:ಯುವಕ ಸಾವು ನಾಲ್ವರಿಗೆ ಗಾಯ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಡಿವೈಡರ್‌ಗೆ ಕಾರು ಡಿಕ್ಕಿಯಾಗಿ ಸ್ಥಳದಲ್ಲೇ ಓರ್ವ ಮೃತಪಟ್ಟಿದ್ದು, ನಾಲ್ವರು ಗಂಭೀರ ಗಾಯಗೊಂಡಿದ್ದಾರೆ.

ತಮಿಳುನಾಡು ಮೂಲದ ಧನುಷ್ (29) ಮೃತಯುವಕ. ತಾಲ್ಲೂಕಿನ ಗುಳಗಳಲೆ ಗ್ರಾಮದ ಬಳಿ ಈ ಘಟನೆ ನಡೆದಿದ್ದು, ಟಿಎನ್-83-ಎ-4555 ನಂಬರಿನ ಕಾರಿನಲ್ಲಿ ಐವರು ಬರುತ್ತಿದ್ದರು. ಇವರಲ್ಲಿ ಇಬ್ಬರು ಯುವಕರು ಕೆಜಿಎಫ್ ಮೂಲದವರು ಎನ್ನಲಾಗಿದೆ.

ಕಾರು ಅತಿವೇಗದಿಂದ ಬಂದು ಡಿವೈಡರ್‌ಗೆ ಡಿಕ್ಕಿ ಹೊಡೆದಿದ್ದು, ಕಾರು ಸಂಪೂರ್ಣ ನಜ್ಜುಗುಜ್ಜಾಗಿದೆ. ಗಾಯಾಳುಗಳಿಗೆ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದು, ಸ್ಥಳಕ್ಕೆ ನಗರ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡಿದ್ದಾರೆ.

## ಪಿಯು ಪರೀಕ್ಷಾ ಕೇಂದ್ರಕ್ಕೆ ಸಂಸದ ಶ್ರೇಯಸ್ ಪಟೇಲ್ ಭೇಟಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯಾದ್ಯಂತ ಫೆ. 28ರಿಂದ ದ್ವಿತೀಯ ಪಿಯು ಪರೀಕ್ಷೆ ಆರಂಭವಾಗಿದೆ. ನಗರದ ಗಂಧದ ಕೋಠಿಯಲ್ಲಿರುವ ಬಾಲಕಿಯರ ವಿಭಜಿತ ಸರ್ಕಾರಿ ಪದವಿ ಪೂರ್ವ ಕಾಲೇಜು ಪರೀಕ್ಷಾ ಕೇಂದ್ರ, ಸಂಸದ ಶ್ರೇಯಸ್ ಎಂ.ಪಟೇಲ್ ಭೇಟಿ ನೀಡಿ ಪರೀಕ್ಷಾರ್ಥಿಗಳಿಗೆ ಶುಭಾಶಯ ಕೋರಿದರು.

ಈ ವೇಳೆ ಪರೀಕ್ಷಾ ಕೊಠಡಿಗಳಿಗೆ ತೆರಳಿದ ಸಂಸದರು ಮಕ್ಕಳು ಹೇಗೆಲ್ಲಾ ಪರೀಕ್ಷೆಗೆ ಸಿದ್ಧತೆ ನಡೆಸಿದ್ದೀರಿ ಎಂದು ಮಕ್ಕಳನ್ನು ಪ್ರಶ್ನಿಸಿದರು. ಯಾವುದೇ ರೀತಿಯಲ್ಲೂ ಹೆದರದೆ, ಧೈರ್ಯವಾಗಿ ಎಲ್ಲ ಪ್ರಶ್ನೆಗಳನ್ನು ಓದಿಕೊಂಡು ಉತ್ತಮವಾಗಿ ಪರೀಕ್ಷೆ ಬರೆಯಿರಿ, ಹೆಚ್ಚು ಅಂಕಗಳಿಸಿ ಎಂದು ಆತ್ಮಸ್ಥೈರ್ಯ ತುಂಬಿದರು.

ಈ ವೇಳೆ ಪರೀಕ್ಷಾ ಕೇಂದ್ರಕ್ಕೆ ನಿಯೋಜನೆ ಮಾಡಿರುವ ಆರೋಗ್ಯ ಸಹಾಯಕಿಯರು ಯಾವೆಲ್ಲ ಔಷಧಿ ತಂದಿದ್ದೀರಾ ಎಂದು ಪರಿಶೀಲನೆ ನಡೆಸಿದರು. ಹಾಗೆಯೇ ಗ್ಲೂಕೋಸ್ ಪೌಡರ್ ಸಹ ತರುವಂತೆ ಸಲಹೆ ನೀಡಿದರು. ಜೊತೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಗಂಗಾಧರ್ ಸೇರಿದಂತೆ ವಿವಿಧ ಅಧಿಕಾರಿಗಳು ಹಾಜರಿದ್ದರು.

## ಗಾಂಜಾ ಮಾರಾಟ ಮಾಡುತ್ತಿದ್ದ ಇಬ್ಬರ ಬಂಧನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಗಾಂಜಾ ಮಾರಾಟ ಮಾಡುತ್ತಿದ್ದ ಇಬ್ಬರನ್ನು ಬಂಧಿಸಿರುವ ಘಟನೆ ತಾಲೂಕಿನ ನಾಗರಹಳ್ಳಿ ಗೇಟ್ ಸಮೀಪ ಶುಕ್ರವಾರ ನಡೆದಿದೆ.

ನಾಗರಹಳ್ಳಿಯ ಚೇತನ್, ಬೇವಿನಮರದ ಕೂಡು ರಸ್ತೆಯ ಸಿ.ಅರುಣ್ ಬಂಧಿತರು. ಅರಸೀಕೆರೆಯ ಶೋಯಬ್ ಅರ್ಫಾನ್ ಎಂಬಾತ ಪೊಲೀಸರನ್ನು ಕಂಡು ಓಡಿಹೋಗಿದ್ದಾನೆ. ಖಚಿತ ಮಾಹಿತಿ ಮೇರೆಗೆ ಗಂಡಸಿ ಪೊಲೀಸ್ ಠಾಣೆಯ ಪಿಎಸ್‌ಐ ಆರತಿ ಹಾಗೂ ಸಿಬ್ಬಂದಿ ದಾಳಿ ನಡೆಸಿದಾಗ ಕೃತ್ಯ ಬಯಲಿಗೆ ಬಂದಿದೆ. ಅನುಮಾನಾಸ್ಪದವಾಗಿ ಓಡಾಡಿಕೊಂಡಿದ್ದವರು ಪೊಲೀಸರು ಬರುತ್ತಿದ್ದಂತೆ ಓಡಿ ಹೋಗಲು ಯತ್ನಿಸಿದರು. ಇಬ್ಬರನ್ನು ಬೆನ್ನಟ್ಟಿ ಹಿಡಿದು ವಿಚಾರಿಸಿದಾಗ ಗಾಂಜಾ ಮಾರಾಟ ಮಾಡುತ್ತಿದ್ದುದು ಗೊತ್ತಾಗಿದೆ. ಬಂಧಿತರಿಂದ 6,500 ರೂ. ಮೌಲ್ಯದ 120 ಗ್ರಾಂ ತೂಕದ ಗಾಂಜಾ ಸೊಪ್ಪನ್ನು ವಶಪಡಿಸಿಕೊಳ್ಳಲಾಗಿದೆ. ಗಂಡಸಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹಿರೀಸಾವೆಯಲ್ಲಿ ಸಂಭ್ರಮದ ಆಯಿ ಮಾತಾ ಉತ್ಸವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲೂಕಿನ ಹಿರೀಸಾವೆಯಲ್ಲಿ ಸಿರವಿ ಸಮಾಜದ ವತಿಯಿಂದ ಶ್ರೀ ಆಯಿ ಮಾತಾ (ಶ್ರೀ ಚಾಮುಂಡೇಶ್ವರಿ ಅವತಾರ) ದೇವಿಯ ಎತ್ತಿನ ಬಂಡಿ ಉತ್ಸವ ಹಾಗೂ ವಿಶೇಷ ಪೂಜೆ ಶನಿವಾರ ವಿಜೃಂಭಣೆಯಿಂದ ನಡೆಯಿತು.

ನೂರಾರು ವರ್ಷಗಳ ಹಿಂದೆಯೇ ರಾಜಸ್ಥಾನ್ ರಾಜ್ಯದ ಜೋಡುಪುರ್ ಜಿಲ್ಲೆಯ ಬಿಲ್ಲಾಡ ಗ್ರಾಮದಿಂದ ಆಗಮಿಸಿ ತಾಲೂಕಿನ ಹಿರೀಸಾವೆ ಗ್ರಾಮದಲ್ಲಿ ಸಿರವಿ ಸಮುದಾಯದ 17 ಕುಟುಂಬಗಳು ನೆಲೆಸಿದ್ದು ಗ್ರಾಮದೇವತೆ ಶ್ರೀ ಆಯಿ ಮಾತಾ ದೇವಿಯನ್ನು ಇಲ್ಲಿಗೆ ಇದೇ ಮೊದಲ ಬಾರಿಗೆ ಕರೆತಂದಿರುವುದು ವಿಶೇಷವಾಗಿದೆ.



1,850 ಕಿಮೀ ದೂರದ ರಾಜಸ್ಥಾನದಿಂದ ದೇವಿಯನ್ನು ಬಸ್‌ನಲ್ಲಿ ಹಿರೀಸಾವೆ ಗ್ರಾಮಕ್ಕೆ ಕರೆತರಲಾಗಿದ್ದು ಅಲ್ಲಿಂದ ಬಸ್‌ನಲ್ಲಿ ಕರೆತರಲಾಗಿದ್ದ ಎತ್ತಿನ ಬಂಡಿಯಲ್ಲಿ ಉತ್ಸವ ಮಾಡಲಾಯಿತು.

ಈ ಹಿನ್ನೆಲೆಯಲ್ಲಿ ಮುಂಜಾನೆಯೇ ಸಮುದಾಯ ಭವನಕ್ಕೆ ಹಸಿರು ಚಪ್ಪರ ಹಾಕಲಾಗಿದ್ದು ತಳಿರು ತೋರಣ ಹಾಗೂ ವಿವಿಧ ಬಗೆಯ ಪುಷ್ಪಗಳಿಂದ ಸಿಂಗರಿಸಲಾಗಿತ್ತು.

ಸಿರವಿ ಸಮುದಾಯದ ಹೆಣ್ಣು ಮಕ್ಕಳು ಕಳಸ ಹೊತ್ತು ಶ್ರೀ ಚಾಮುಂಡೇಶ್ವರಿ ದೇವಿಯ ಅವತಾರ ಎನ್ನಲಾದ ಶ್ರೀ ಆಯಿ ಮಾತಾ ದೇವಿಯನ್ನು ಪೂರ್ಣ ಕುಂಭದೊಂದಿಗೆ ಸ್ವಾಗತಿಸಿದರು.

ಸಿರವಿ ಸಮುದಾಯ ಭವನದಲ್ಲಿ ದೇವಿಯನ್ನು ಪ್ರತಿಷ್ಠಾಪಿಸಿ ವಿಶೇಷ ಪೂಜೆ ಸಲ್ಲಿಸುವ ಮೂಲಕ ಆಶೀರ್ವಾದ ಪಡೆದರು. ಸೋಬಾನೆ ಪದ, ಭಜನೆ ನಂತರ ಮಹಾಮಂಗಳಾರತಿ ಬೆಳಗಿಸಲಾಯಿತು. ಅನ್ನದಾಸೋಹ ನಡೆಯಿತು.

ಸಿರವಿ ಸಮಾಜದ ಅಧ್ಯಕ್ಷ ನಾರಾಯಣ್ ಲಾಲ್, ಸಚಿವ ತೇಜಾ ರಾಮ್, ಖಜಾಂಚಿ ರಮೇಶ್ ಧಾತ, ಪ್ರಮುಖರಾದ ಈಶ್ವರ್ ಗುಜರ್, ಮೂಳಾ ರಾಮ್, ಚೇನಾ ರಾಂ, ತೇಜಾ ರಾಮ್, ಓಂ ಪ್ರಕಾಶ್ ಸಿರವಿ, ಮನೋಹರ್ ಲಾಲ್, ಸಂದೀಪ್ ಬಿ. ದೇಶಮುಖ್, ಪುರುಷೋತ್ತಮ್ ಸಿರವಿ, ತೇಜಾ ರಾಮ್, ರಮೇಶ್ ಸಿರವಿ ದಾತ, ರಾಜು ಜೀ ಪುರೋಹಿತ್, ಹಿರಲಾಲ್ ಕಲಾಲ್, ಹಿರಲಾಲ್ ಸಿರವಿ, ದಿನೇಶ್ ಲಾಲ್ ಕಾಯಕ್ ಹಾಗೂ ಇತರರಿದ್ದರು.

## ಲೋನ್ ಹೆಸರಿನಲ್ಲಿ ಬ್ಯಾಂಕ್ ವ್ಯವಸ್ಥಾಪಕಿಯಿಂದ ಭಾರೀ ಮೋಸ?

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ತಣ್ಣೀರುಹಳ್ಳದಲ್ಲಿರುವ ಸುರ್ಯೋದಯ ಸ್ಮಾಲ್ ಫೈನಾನ್ಸ್ ಬ್ಯಾಂಕ್‌ನ ವ್ಯವಸ್ಥಾಪಕಿ ಹೆಚ್. ಎಸ್.ಪೂಜಾ ಎಂಬುವವರು ನೂರಕ್ಕೂ ಅಧಿಕ ಜನರಿಗೆ ಲೋನ್ ಕೊಡಿಸುವ ಹೆಸರಿನಲ್ಲಿ ಕೋಟ್ಯಂತರ ರೂಪಾಯಿ ಕೊಳ್ಳೆ ಹೊಡೆದಿರುವ ಪ್ರಕರಣ ಬೆಳಕಿಗೆ ಬಂದಿದೆ.

ವಿವಿಧ ಯೋಜನೆಯಡಿ ಲೋನ್ ಮಾಡಿಸಿಕೊಡುತ್ತೇನೆ. ನಿಗದಿತ ಠೇವಣಿ ಇಟ್ಟರೆ 25 ರಿಂದ 50 ಲಕ್ಷ ರೂ. ವರೆಗೆ ಲೋನ್ ಕೊಡಿಸುತ್ತೇನೆ. ಅದಕ್ಕೆ 10 ಲಕ್ಷ ರೂ. ವರೆಗೆ ಸಹಾಯಧನ ದೊರೆಯುತ್ತದೆಂದು ಪೂಜಾ ನಂಬಿಸಿದ್ದರು. ಅವರ ಮಾತಿಗೆ ಮರುಳಾಗಿ ಸಾಲ ಸೋಲ ಮಾಡಿ ಠೇವಣಿ ಕಟ್ಟಿದ್ದೇವೆ. ನಮಗೆ ನ್ಯಾಯ ದೊರಕಿಸಿಕೊಡಬೇಕೆಂದು 40ಕ್ಕೂ ಹೆಚ್ಚು ಜನರು ಶುಕ್ರವಾರ ರಾತ್ರಿ




ಪೆನ್ಷನ್ ಮೊಹಲ್ಲಾ ಠಾಣೆ ಎದುರು ಜಮಾಯಿಸಿದ್ದರು.

ಬ್ಯಾಂಕ್‌ನಲ್ಲಿ ಎಫ್‌ಡಿ ಇಟ್ಟರೆ 25 ರಿಂದ 50 ಲಕ್ಷ ರೂ. ವರೆಗೆ ಸಾಲ ಕೊಡಿಸುವ ಆಮಿಷವನ್ನು ಪೂಜಾ ನೀಡಿದ್ದರು. ಸುಲಭದ ಸಾಲಕ್ಕೆ ಮಾರುಹೋದ ಜನರು ಎಫ್‌ಡಿ ಮಾಡಿದ್ದರು.

ವಿಪರ್ಯಾಸ ಎಂದರೆ ಎಫ್‌ಡಿ ಮಾಡಿರುವ ಹಣಕ್ಕೆ ಯಾವ ದಾಖಲೆಯನ್ನು ವ್ಯವಸ್ಥಾಪಕಿ ನೀಡಿರಲಿಲ್ಲ. ಗ್ರಾಹಕರೂ ಕೇಳಿರಲಿಲ್ಲ ಎನ್ನಲಾಗಿದೆ. ಇತ್ತೀಚೆಗೆ ಗ್ರಾಹಕರು ಹಣ ವಾಪಸ್ ಕೇಳಲು ಆರಂಭಿಸಿದಾಗ ಕೆಲವರಿಗೆ ಚೆಕ್ ನೀಡಿದ್ದ ಪೂಜಾ ಎಸ್ಕೇಪ್ ಆಗಿದ್ದಾರೆ ಎನ್ನಲಾಗಿದೆ.

### ವಿದೇಶಕ್ಕೆ ಪರಾರಿ ಅನುಮಾನ

ಚನ್ನಪಟ್ಟಣ ಬಡಾವಣೆಯ ಅಶೋಕ್ ಎಂಬುವವರಿಗೆ ಫೆ. 6ರಂದು ಚೆಕ್ ನೀಡಿದ್ದ ಪೂಜಾ ಆ ಬಳಿಕ ಸಿಕ್ಕಿಲ್ಲ. ಬ್ಯಾಂಕ್‌ಗೆ ಬಂದು ವಿಚಾರಿಸಿದಾಗ ವೈದ್ಯಕೀಯ ಕಾರಣಗಳಿಂದ ರಜೆಯಲ್ಲಿದ್ದಾರೆಂಬ ಉತ್ತರ ಬಂದಿದೆ.

ಅದರಿಂದ ಅನುಮಾನಗೊಂಡ ಅವರು ಮೊಬೈಲ್ ನಂಬರ್‌ಗೆ ಕರೆ ಮಾಡಿದಾಗ ಸ್ವಿಚ್ಡ್ ಆಫ್ ಆಗಿದೆ. ಕೋಟ್ಯಾಂತರ ರೂಪಾಯಿ ವಂಚಿಸಿರುವ ಪೂಜಾ ವಿದೇಶಕ್ಕೆ ಪರಾರಿಯಾಗಿರುವ ಅನುಮಾನ ವ್ಯಕ್ತವಾಗಿದೆ.

ಅವರು ವಿಮಾನ ನಿಲ್ದಾಣದಲ್ಲಿ ಓಡಾಡುತ್ತಿರುವ ಮಾಹಿತಿ ಇದ್ದು, ಪರಾರಿಯಾಗಲು ಯಾವ ಕಾರಣಕ್ಕೂ ಬಿಡಬಾರದು. ಪಾಸ್ ಪೋರ್ಟ್ ರದ್ದು ಮಾಡಿ ವಿದೇಶ ಪ್ರಯಾಣವನ್ನು ತಡೆಯಬೇಕು. ಸಾಲ ಕೊಡಿಸುವ ಆಮಿಷವೊಡ್ಡಿ ಗ್ರಾಹಕರನ್ನು ವಂಚಿಸಿರುವ ಆಕೆಯನ್ನು ಬಂಧಿಸಿ, ತಮಗೆ ನ್ಯಾಯ ಕೊಡಿಸಬೇಕೆಂದು ಗ್ರಾಹಕರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭಾನ್ವಿತಾ ಅವರಿಗೂ ದೂರು ನೀಡಿದ್ದಾರೆ.

## ವಿಜ್ಞಾನ-ಸಾಹಿತ್ಯ ಜೀವನಕ್ಕೆ ಅತಿ ಮುಖ್ಯ: ಜೋಗಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ದೇಹಕ್ಕೆ ಆಗುವ ಗಾಯವನ್ನು ವಿಜ್ಞಾನದಿಂದ ಪರಿಹರಿಸಬಹುದು ಆದರೆ. ಮನಸ್ಸಿಗೆ ಆಗುವ ಗಾಯಗಳಿಂದ ಮುಕ್ತಿ ಪಡೆಯಲು ಸಾಹಿತ್ಯ ಅತ್ಯವಶ್ಯವೆಂದು ಲೇಖಕ ಜೋಗಿ ಅಭಿಪ್ರಾಯಪಟ್ಟರು. ನಗರದ ವಿಜಯ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಹಮಿಕೊಂಡಿರುವ ಎರಡು ದಿನಗಳ ದಿ ಹಾಸನ್ ಲಿಟರೇಚರ್ ಫೆಸ್ಟಿವಲ್ 2026ಕ್ಕೆ ಶನಿವಾರ ಚಾಲನೆ ನೀಡಿ ಮಾತನಾಡಿ, ಮನಸ್ಸಿನ ನೋವು ಮರೆಯಲು ಪುಸ್ತಕ ನೆರವಾಗುತ್ತದೆ. ವಿದ್ಯಾರ್ಥಿಗಳು ಈಗಿನಿಂದಲೇ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಮೈಸೂರು, ಬೆಂಗಳೂರಿನಲ್ಲಿ ನಡೆಯುವ ಸಾಹಿತ್ಯೋತ್ಸವ ಮಾದರಿಯಲ್ಲಿ ಹಾಸನದಲ್ಲೂ ಈ ವರ್ಷದಿಂದ ಸಾಹಿತ್ಯೋತ್ಸವ ಪ್ರಾರಂಭವಾಗಬೇಕು. ಅದಕ್ಕೆ ವಿಜಯ ಶಾಲೆ ಮುನ್ನುಡಿ ಬರೆದಿದೆ ಎಂದರು.

ಜೈಪುರ ಸಾಹಿತ್ಯೋತ್ಸವ ದೇಶದ ಗಮನ ಸೆಳೆದಿದೆ. ಸಾಹಿತ್ಯ ಮಕ್ಕಳಿಂದ ಶುರುವಾಗಬೇಕು ಎನ್ನುವುದನ್ನು ಅಲ್ಲಿ ನಾನು ಕಲಿತಿದ್ದೇನೆ. ಕಾರ್ಯಕ್ರಮದಲ್ಲಿ ಭಾಗವಹಿಸುವ ಮಕ್ಕಳು ಕಥೆ, ಕವನಗಳೊಂದಿಗೆ ಹಾಜರಾಗುತ್ತಾರೆ. ನಮಿತಾ, ವಿಲಿಯಂ, ಸಂಜಯ್ ಎಂಬುವವರು ಜೈಪುರ ಸಾಹಿತ್ಯೋತ್ಸವವನ್ನು ಕೇವಲ ಒಂಬತ್ತು ಜನ ಪ್ರೇಕ್ಷಕರೊಂದಿಗೆ ಶುರು ಮಾಡಿದರು. ಆದರೆ, ಇಂದು ಐದು ಲಕ್ಷ ಜನರು ಭಾಗವಹಿಸುತ್ತಾರೆ. ಸಣ್ಣ ಸಣ್ಣ ಆರಂಭಗಳು ನಂತರದ ದಿನಗಳಲ್ಲಿ ದೊಡ್ಡ ಫಲಿತಾಂಶ ನೀಡುತ್ತವೆಂದರು.



### ಸಾಂಸ್ಕೃತಿಕ ಕಾರ್ಯಕ್ರಮಗಳ ಮೆರುಗು

ಮೊದಲ ಬಾರಿಗೆ ಹಾಸನದಲ್ಲಿ ಹಮಿಕೊಂಡಿರುವ ಮಕ್ಕಳ ಸಾಹಿತ್ಯೋತ್ಸವಕ್ಕೆ ವಿವಿಧ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ಭಾಗವಹಿಸಿ ಮೆರುಗು ತಂದರು. ಪುಸ್ತಕ ಮಳಿಗೆ ಮಾತ್ರವಲ್ಲದೆ ಚಿತ್ರಕಲೆ ಸ್ಪರ್ಧೆ, ಗೋಡೆ ಬರಹ, ಸಾಂಸ್ಕೃತಿಕ ಕಾರ್ಯಕ್ರಮಗಳು ಸಾಹಿತ್ಯೋತ್ಸವದ ಮೆರುಗು ಹೆಚ್ಚಿಸಿದವು. ಉದ್ಘಾಟನಾ ಕಾರ್ಯಕ್ರಮದ ಬಳಿಕ ನಡೆದ ನಂದಿತಾ ರಾವ್ ಅವರ ಸಂವಾದ ಮಕ್ಕಳ ಬುದ್ಧಿ ಶಕ್ತಿಗೆ ಸಾಣೆ ಹಿಡಿದಂತಾಯಿತು.

ನಮ್ಮ ಅರಿವಿನ ವಿಸ್ತಾರ ಹೆಚ್ಚಬೇಕೆಂದರೆ ಓದುವುದನ್ನು ಕಲಿಯಬೇಕು. ಸಾಹಿತ್ಯ ಒಡೆದ ಹೃದಯಗಳನ್ನು ಜೋಡಿಸುತ್ತದೆ. ಹಾಸನ ಜಿಲ್ಲೆಯವರೇ ಆದ ಎಸ್. ಎಲ್. ಭೈರಪ್ಪ, ಬೂಕರ್ ಪ್ರಶಸ್ತಿ ವಿಜೇತ ಬಾನು ಮುಷ್ತಾಕ್ ಅವರನ್ನು ವಿದ್ಯಾರ್ಥಿಗಳು ಪ್ರೇರಣೆಯಾಗಿ ಪಡೆಯಬೇಕೆಂದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಹೆಚ್.ಬಿ. ಮದನಗೌಡ ಅವರು ಮಾತನಾಡಿ, ಮಕ್ಕಳಲ್ಲಿ ಸಾಹಿತ್ಯ ಅಭಿರುಚಿ, ಪುಸ್ತಕ ಓದುವ ಹವ್ಯಾಸ ಬೆಳೆಸುವ ಪುಣ್ಯದ ಕೆಲಸವನ್ನು ವಿಜಯ ಶಾಲೆಯವರು ಮಾಡುತ್ತಿರುವುದು ಹೆಮ್ಮೆಯ ವಿಚಾರ ಎಂದರು.

ಇತ್ತೀಚೆಗೆ ಓದುವವರ ಸಂಖ್ಯೆ ಕ್ಷೀಣಿಸುತ್ತಿದೆ. ಸಾಹಿತ್ಯದಿಂದ ವ್ಯಕ್ತಿತ್ವ ವಿಕಸನವಾಗುತ್ತದೆ. ಸಮಾಜ ಸ್ವಸ್ಥವಾಗಿರಬೇಕೆಂದರೆ ಸಾಂಸ್ಕೃತಿಕ ಚಟುವಟಿಕೆಗಳು ನಿರಂತರವಾಗಿರಬೇಕು. ಈ ನಾಡಿಗೆ ಒಳ್ಳೆಯ ಸಂದೇಶ ಕೊಡಬೇಕು. ಆ ನಿಟ್ಟಿನಲ್ಲಿ ವಿಜಯ ಶಾಲೆ ಒಳ್ಳೆಯ ಕಾರ್ಯಕ್ರಮ ಕೊಡುತ್ತಿದೆ. ಪ್ರತಿವರ್ಷ ಈ ಕಾರ್ಯಕ್ರಮ ನಡೆಯಲಿ ಎಂದು



ಶುಭ ಹಾರೈಸಿದರು.

ವಿಜಯ ಶಾಲೆಯ ಸಂಸ್ಥಾಪಕ ನಿರ್ದೇಶಕಿ ತಾರಾ ಎಸ್. ಸ್ವಾಮಿ ಅಧ್ಯಕ್ಷೀಯ ನುಡಿಗಳನ್ನಾಡಿದರು. ಶೈಕ್ಷಣಿಕ ಮುಖ್ಯಸ್ಥೆ ಶ್ರೀ ಲಕ್ಷ್ಮಿ ಪ್ರಾಸ್ತಾವಿಕ ಮಾತುಗಳನ್ನಾಡಿದರು. ಸಂಸ್ಥೆಯ ಅಧ್ಯಕ್ಷ ಸುಬ್ಬಸ್ವಾಮಿ, ಪ್ರಾಂಶುಪಾಲ ಕೆ.ಎಸ್.ನಂದೀಶ್, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಜರಿದ್ದರು.

# ಮಕ್ಕಳಲ್ಲಿ ವೈಜ್ಞಾನಿಕ ಚಿಂತನೆ ಬೆಳೆಸುವುದೇ ಶಿಕ್ಷಣದ ಗುರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಆಲೂರು: ಮಕ್ಕಳಲ್ಲಿ ವೈಜ್ಞಾನಿಕ ಅರಿವು ಮೂಡಿಸುವುದರ ಮೂಲಕ ವೈಜ್ಞಾನಿಕ ಚಿಂತನೆಯನ್ನು ವೃದ್ಧಿಸುವುದೇ ಶಿಕ್ಷಣದ ಪ್ರಮುಖ ಉದ್ದೇಶವಾಗಿದ್ದು, ನಮ್ಮ ಸಂವಿಧಾನದ ಪೀಠಿಕೆ ಇದನ್ನೇ ಒತ್ತಿಹೇಳುತ್ತದೆ ಎಂದು ತಾಲ್ಲೂಕು ಸ್ಕೌಟ್ಸ್ ಅಂಡ್ ಗೈಡ್ಸ್ ಸಹ ಕಾರ್ಯದರ್ಶಿ ಎಚ್.ಡಿ. ಕುಮಾರ್ ಅಭಿಪ್ರಾಯಪಟ್ಟರು.

ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಸ್ಥಳೀಯ ಸಂಸ್ಥೆ, ಆಲೂರು ಹಾಗೂ ಇಕೋ ಕ್ಲಬ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ತಾಳೂರು ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯಲ್ಲಿ ಮಾತನಾಡಿ, ಒಮ್ಮೆ ಹಡಗಿನಲ್ಲಿ ಪ್ರಯಾಣಿಸುವಾಗ ರಾಮನ್ ಅವರಿಗೆ ಸಮುದ್ರ ಏಕೆ ಯಾವಾಗಲೂ ನೀಲಿಯಾಗಿಯೇ ಕಾಣುತ್ತದೆ ಎಂಬ ಪ್ರಶ್ನೆ ಎದುರಾಯಿತಂತೆ. ಅದು ಆಕಾಶದ ಬಣ್ಣದ ಪ್ರತಿಫಲನವೋ ಅಥವಾ ಈ ನೀಲಿ ಬಣ್ಣದ ಹಿಂದೆ ಬೇರೇನಾದರೂ ಗುಟ್ಟು ಅಡಗಿದೆಯೋ ಎಂದು ಪತ್ತೆಮಾಡಲು ಹೊರಟ ರಾಮನ್ ಸೂರ್ಯನ ಬೆಳಕು ನೀರಿನಲ್ಲಿ ಚದುರಿ ಹೋಗುವುದೇ ಸಮುದ್ರದ ನೀರು ನೀಲಿಯಾಗಿ ಕಾಣಲು ಕಾರಣ ಎಂಬ ವಿಷಯವನ್ನು ಕಂಡುಹಿಡಿದರು. ಇದೇ ಅಂಶ ಮುಂದೆ ಅವರು ತಮ್ಮ ಅಧ್ಯಯನವನ್ನು ಮುಂದುವರೆಸಲು ಪ್ರೇರಣೆಯಾಯಿತು. ಕೋಲ್ಕತಾದ ಇಂಡಿಯನ್ ಅಸೋಸಿಯೇಷನ್ ಫಾರ್ ಕಲ್ಟಿವೇಷನ್ ಆಫ್ ಸೈನ್ಸ್‌ನಲ್ಲಿ ರಾಮನ್ ಅವರು ತಮ್ಮ ಸಹೋದ್ಯೋಗಿಗಳೊಡನೆ ನಡೆಸಿದ ಅಧ್ಯಯನಗಳ ಪರಿಣಾಮವೇ ರಾಮನ್ ಪರಿಣಾಮದ ಶೋಧ. ಇದೇ ಸಾಧನೆಗಾಗಿ ಅವರಿಗೆ 1930ನೇ ಇಸವಿಯಲ್ಲಿ ನೊಬೆಲ್ ಪುರಸ್ಕಾರ ನೀಡಿ ಗೌರವಿಸಲಾಯಿತು.

ಇದು ವಿಜ್ಞಾನ ಕ್ಷೇತ್ರದಲ್ಲಿ ಭಾರತಕ್ಕೆ ದೊರೆತ ಮೊತ್ತಮೊದಲ ನೊಬೆಲ್ ಪುರಸ್ಕಾರವೂ ಹೌದು. ರಾಷ್ಟ್ರೀಯ ವಿಜ್ಞಾನ ದಿನವನ್ನು ಭಾರತದಲ್ಲಿ ಪ್ರತಿವರ್ಷ ಫೆ. 28 ರಂದು ಆಚರಿಸಲಾಗುತ್ತದೆ. ವಿಜ್ಞಾನದಲ್ಲಿ ನೊಬೆಲ್ ಪ್ರಶಸ್ತಿ ಪಡೆದ ಏಷ್ಯಾದ ಮೊತ್ತ ಮೊದಲ ವಿಜ್ಞಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾದ ಸಿ.ವಿ. ರಾಮನ್ ಅವರ ಪೂರ್ಣ ಹೆಸರು ಚಂದ್ರಶೇಖರ ವೆಂಕಟರಾಮನ್. ಅವರು ಜನಿಸಿದ್ದು ತಮಿಳುನಾಡಿನ ತಿರುಚಿನಾಪಳ್ಳಿಯಲ್ಲಿ, 1888ರ ನ. 7ರಂದು. ಅವರ ತಂದೆ ಚಂದ್ರಶೇಖರ ಅಯ್ಯರ್ ಗಣಿತ ಹಾಗೂ ಭೌತವಿಜ್ಞಾನದ ಶಿಕ್ಷಕರಾಗಿದ್ದರು. ದೈನಂದಿನ ಜೀವನದಲ್ಲಿ ವಿಜ್ಞಾನದ ಪಾತ್ರ ಮತ್ತು ಮಹತ್ವದ ಬಗ್ಗೆ ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಲು ಈ ದಿನವನ್ನು ಬಳಸಿಕೊಳ್ಳಲಾಗುತ್ತದೆ. ವಿದ್ಯಾರ್ಥಿಗಳಲ್ಲಿ ವಿಜ್ಞಾನದ ಕಡೆಗೆ ಆಸಕ್ತಿ ಮೂಡಿಸಲು ಮತ್ತು ಸಂಶೋಧನಾ ಕ್ಷೇತ್ರದಲ್ಲಿ ವೃತ್ತಿಜೀವನವನ್ನು ಮುಂದುವರಿಸಲು ಪ್ರೇರೇಪಿಸಲು ಶಾಲೆ-ಕಾಲೇಜುಗಳಲ್ಲಿ ವಿವಿಧ ಚಟುವಟಿಕೆಗಳನ್ನು ಆಯೋಜಿಸಲಾಗುತ್ತದೆ. ಸಮಾಜದಲ್ಲಿ ಮೂಢನಂಬಿಕೆಗಳನ್ನು ತೊರೆದು ವೈಜ್ಞಾನಿಕ ಮತ್ತು ತಾರ್ಕಿಕ ಚಿಂತನೆಯನ್ನು ಬೆಳೆಸಲು ಪ್ರೋತ್ಸಾಹಿಸಲಾಗುತ್ತದೆ. ವಿಜ್ಞಾನ ಮತ್ತು ತಂತ್ರಜ್ಞಾನದ ಬಳಕೆಯಿಂದ ಸುಸ್ಥಿರ ಭವಿಷ್ಯವನ್ನು ಹೇಗೆ ನಿರ್ಮಿಸಬಹುದು ಎಂಬುದರ ಬಗ್ಗೆ ಚರ್ಚೆ ಮತ್ತು ಜಾಗೃತಿ ಮೂಡಿಸಲಾಗುತ್ತದೆ ಎಂದರು.

ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಡಿ.ಎಂ. ವರದರಾಜು ಮಾತನಾಡಿ, ರಾಷ್ಟ್ರೀಯ ವಿಜ್ಞಾನ ದಿನ ಎಲ್ಲ ಭಾರತೀಯರೂ ಒಂದಾಗಿ, ವಿಜ್ಞಾನದ ಶಕ್ತಿಯನ್ನು ಸಂಭ್ರಮಿಸುವ ಸಂದರ್ಭವಾಗಿದೆ. ಇದು ವೈಜ್ಞಾನಿಕ ಸಾಧನೆಗಳನ್ನು ಪ್ರದರ್ಶಿಸಲು ವೇದಿಕೆ ಒದಗಿಸುತ್ತದೆ. ವೈಜ್ಞಾನಿಕ ಆಲೋಚನೆಯನ್ನು ಉತ್ತೇಜಿಸುತ್ತದೆ. ಭಾರತದಲ್ಲಿ ವೈಜ್ಞಾನಿಕ ಸಂಶೋಧನೆ ಮತ್ತು ಆವಿಷ್ಕಾರಗಳಿಗೆ ಬೆಂಬಲ ನೀಡುತ್ತದೆ. ವಿಜ್ಞಾನ ದಿನದಂದು ಭಾರತದಲ್ಲಿ ವಿಜ್ಞಾನ ವಸ್ತು ಪ್ರದರ್ಶನಗಳು, ವಿಚಾರ ಗೋಷ್ಠಿಗಳು, ಕಾರ್ಯಾಗಾರ ಮತ್ತು ಸಾರ್ವಜನಿಕ ಉಪನ್ಯಾಸಗಳನ್ನು ಆಯೋಜಿಸಲಾಗುತ್ತದೆ ಎಂದರು.

ಭಾರತ್ ಸ್ಕೌಟ್ಸ್-ಗೈಡ್ಸ್ ಆಲೂರು ತಾಲ್ಲೂಕು ಕಾರ್ಯದರ್ಶಿ ಕೊಟ್ರೇಶ್ ಎಸ್. ಉಪ್ಪಾರ್ ಮಾತನಾಡಿ, ಸಾಮಾಜಿಕ ಮೌಢ್ಯಗಳನ್ನು ಧಿಕ್ಕರಿಸಲು ವೈಜ್ಞಾನಿಕ ಮನೋವೃತ್ತಿ ಅತ್ಯವಶ್ಯಕ. ಚಿಕ್ಕ ವಯೋಮಾನದಿಂದಲೇ ಮಕ್ಕಳಲ್ಲಿ ವೈಜ್ಞಾನಿಕ ಆಲೋಚನೆಗಳನ್ನು ಬಿತ್ತುವುದರ ಮುಖೇನ ವೈಚಾರಿಕ ಪ್ರಜ್ಞೆಯನ್ನುಂಟು ಮಾಡುವುದು ನಾಗರಿಕರಾದ ನಮ್ಮೆಲ್ಲರ ಬಹುದೊಡ್ಡ ಜವಾಬ್ದಾರಿಯಾಗಿದೆ. ಪ್ರತಿ ಆಚರಣೆಗಳೂ ಸಹ ತನ್ನದೇಯಾದ ಮಹತ್ವ ಹೊಂದಿರುತ್ತವೆ. ಅವುಗಳ ಗುರಿ-ಉದ್ದೇಶ ಗ್ರಹಿಸಿ ಅಳವಡಿಸಿಕೊಳ್ಳಬೇಕಿದೆ ಎಂದರು.

ಹಿರಿಯ ಶಿಕ್ಷಕಿ ವಿ.ರವಿತ ಕಾರ್ಯಕ್ರಮ ನಿರ್ವಹಣೆ ಮಾಡಿದರು. ಅತಿಥಿ ಶಿಕ್ಷಕಿ ಭಾಗ್ಯಮ್ಮ ಹಾಗೂ ಸ್ಕೌಟ್ಸ್- ಗೈಡ್ಸ್ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಆಶಾ ಕಾರ್ಯಕರ್ತೆಯರ ಗೌರವಧನ ಹೆಚ್ಚಳಕ್ಕೆ ಆಗ್ರಹಿಸಿ ಪ್ರತಿಭಟನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯ ಸರ್ಕಾರ ಕೊಟ್ಟ ಮಾತಿನಂತೆ ಆಶಾ ಕಾರ್ಯಕರ್ತರಿಗೆ ಕನಿಷ್ಟ 10 ಸಾವಿರ ರೂ. ಗೌರವಧನ ಆದೇಶ ಜಾರಿಗೊಳಿಸಬೇಕೆಂದು ಆಗ್ರಹಿಸಿ ಶುಕ್ರವಾರ ಜಿಲ್ಲಾಧಿಕಾರಿ ಕಚೇರಿ ಎದುರು ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದಿಂದ ಪ್ರತಿಭಟನೆ ನಡೆಸಲಾಯಿತು.

2025ರ ಜನವರಿ 7ರಿಂದ 10ರ ವರೆಗೆ ನಡೆದ ಅಹೋರಾತ್ರಿ ಧರಣಿ ಸಂದರ್ಭದಲ್ಲಿ ಹೋರಾಟಗಾರರ ಸಭೆ ನಡೆಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೇಡಿಕೆ ಈಡೇರಿಕೆಗೆ ಸಮ್ಮತಿಸಿದ್ದರು. ಆದರೆ ಆ ವರ್ಷದ ಬಜೆಟ್‌ನಲ್ಲಿ ಯಾವ ನಿರ್ಧಾರವನ್ನು ಪ್ರಕಟಿಸಲಿಲ್ಲ. ಚುನಾವಣೆ ಪ್ರಣಾಳಿಕೆಯಲ್ಲಿ ಆಶಾ ಕಾರ್ಯಕರ್ತರ ಗೌರವ ಧನವನ್ನು 5 ರಿಂದ 8 ಸಾವಿರ ರೂ.ಗೆ ಹೆಚ್ಚಿಸುವ ಭರವಸೆ ನೀಡಲಾಗಿತ್ತಾದರೂ ಇದುವರೆಗೆ ಈಡೇಸಿಲ್ಲ ಎಂದು ಆರೋಪಿಸಿದರು.

ಇಲ್ಲಸಲ್ಲದ ನೆಪವೊಡ್ಡಿ ಆಶಾ ಕಾರ್ಯಕರ್ತೆಯರನ್ನು ಕೆಲಸದಿಂದ ತೆಗೆದು ಹಾಕುವ ಅವೈಜ್ಞಾನಿಕ ನಿರ್ಧಾರಕ್ಕೆ ಸರ್ಕಾರ ಮುಂದಾಗಿದೆ. ಕೆಲಸದಿಂದ ಕೈಬಿಟ್ಟ ಆಶಾಗಳಿಗೆ ಹೊರ ಗುತ್ತಿಗೆ ಗ್ರೂಪ್ ಡಿ ನೌಕರಿ ಕೆಲಸ ಕೊಡಿಸುವ ಭರವಸೆ ನೀಡಲಾಗಿತ್ತಾದರೂ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ. ಪ್ರತಿ ಹಂತದಲ್ಲೂ ಆಶಾ ಕಾರ್ಯಕರ್ತರನ್ನು ಸರ್ಕಾರ ಕಡೆಗಣಿಸುತ್ತಲೇ ಬಂದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಭ್ರಷ್ಟಾಚಾರ ನಿಯಂತ್ರಣ ಸಾಧ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಚನ್ನರಾಯಪಟ್ಟಣ: ಜನರು ಭ್ರಷ್ಟಾಚಾರವನ್ನು ಧೈರ್ಯವಾಗಿ ವಿರೋಧಿಸುವ ಮನಸ್ಸು ಮಾಡಿದರೆ ಖಂಡಿತ ಅದಕ್ಕೆ ಕಡಿವಾಣ ಹಾಕಬಹುದು ಎಂದು ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ ಹೇಳಿದರು.

ಪಟ್ಟಣದ ಕರ್ನಾಟಕ ಸಂಘದ ಆವರಣದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಭ್ರಷ್ಟಾಚಾರ ನಿರ್ಮೂಲನ ಹಾಗೂ ಕಾರ್ಯಾಚರಣೆ ಸಮಿತಿ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಮಾತನಾಡಿದ ಅವರು, ಭ್ರಷ್ಟಾಚಾರವನ್ನು ತಿಳವಳಿಕೆ ಮೂಲಕ ಪರಿಹರಿಸುವ ಪ್ರಯತ್ನ ಆಗಬೇಕು. ಸ್ವಜನ ಪಕ್ಷಪಾತ, ಜಾತೀಯತೆಯಿಂದ ಹೊರತಾಗಿರಬೇಕು. ಸಂಘಟನಾತ್ಮಕ ಹೋರಾಟ ಹೆಚ್ಚಾದರೆ ಭ್ರಷ್ಟಾಚಾರವನ್ನು ತಗ್ಗಿಸಲು ಸಾಧ್ಯವಿದೆ ಎಂದರು.

ಲಂಚ ಸ್ವೀಕರಿಸುವುದಷ್ಟೇ ಭ್ರಷ್ಟಾಚಾರವಲ್ಲ. ಆ ರೀತಿ ಯೋಚನೆ ಮಾಡುವುದು ಸಹ ಭ್ರಷ್ಟಾಚಾರ ವಾಗುತ್ತದೆ. ಕನಸು ಮನಸ್ಸಿನಲ್ಲಿಯೂ ಭ್ರಷ್ಟಾಚಾರದ ಪರವಾಗಿ ಯೋಚಿಸಬಾರದು. ಸದಾ ನಮ್ಮ ಮನಸ್ಸು ಭ್ರಷ್ಟಾಚಾರದ ವಿರುದ್ಧವಾಗಿರಬೇಕು. ಭ್ರಷ್ಟಾಚಾರ ಹೋರಾಟ ಸಣ್ಣ ವಿಚಾರವಲ್ಲ. ಅತ್ಯಂತ ಕಠಿಣ ಸಂದರ್ಭಗಳು ಎದುರಾಗುತ್ತವೆ. ಅಂತಹ ಪರಿಸ್ಥಿತಿಗಳನ್ನು ಎದುರಿಸಲು ಸಂಘಟಿತರಾಗಿ ದೃಢವಾಗಿ ನಿಂತರೆ ಹಂತ ಹಂತವಾಗಿ ಲೋಪ ತಡೆಯಲು ಸಾಧ್ಯವಿದೆ. ಯುದ್ಧವನ್ನು ಬೇಕಾದರೆ ಗೆಲ್ಲಬಹುದು ಆದರೆ, ಭ್ರಷ್ಟಾಚಾರವನ್ನು ಸೋಲಿಸುವುದು ಬಹಳ ಕಷ್ಟದ ಕೆಲಸವೆಂದರು.

ಕಾರ್ಯಕ್ರಮ ಉದ್ಘಾಟಿಸಿದ ಹಾಸನದ ನಿವೃತ್ತ ಸೆಷನ್ ನ್ಯಾಯಾಧೀಶ ಬಿ. ವೆಂಕಟೇಶ್ ಮಾತನಾಡಿ, ಭ್ರಷ್ಟಾಚಾರ ನಿರ್ಮೂಲನೆ ಮಾಡುವಲ್ಲಿ ನಾನು ಸಹ ನಿಮ್ಮ ಜೊತೆ ಕೈಜೋಡಿಸುತ್ತೇನೆ. ನಾನು ಹಾಸನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಪ್ರತಿನಿತ್ಯ ಸಾರ್ವಜನಿಕರಿಗೆ ಲಭ್ಯವಿದ್ದು ನಾನು ಕಾನೂನು ರೀತಿಯ ಸಲಹೆಗಳನ್ನು ನೀಡುತ್ತೇನೆಂದರು.

ಅಧ್ಯಕ್ಷತೆ ವಹಿಸಿದ್ದ ಸಮಿತಿಯ ಅಧ್ಯಕ್ಷ ಎನ್.ಎಸ್.ಮಂಜುನಾಥ್ ಮಾತನಾಡಿ, ನಮ್ಮ ದೇಶ ಜಗತ್ತಿನ ಭ್ರಷ್ಟಾಚಾರ ಪಟ್ಟಿಯಲ್ಲಿ 91 ಸ್ಥಾನದಲ್ಲಿದೆ. ಈ ಭ್ರಷ್ಟಾಚಾರವು ಭಾರತದ ಆತ್ಮದ ಮೇಲೆ ನಡೆಯುತ್ತಿರುವ ಆಕ್ರಮಣವಾಗಿದೆ. ಇದನ್ನು ಸಂಘಟಿತ ರೂಪದಲ್ಲಿ ದೇಶಾದ್ಯಂತ ನಿರ್ಮೂಲನೆ ಮಾಡುವ ಪಣತೊಟ್ಟು ಈ ಹಿಂದೆ ಅಣ್ಣ ಹಜಾರೆಯವರ ಜೊತೆಯಲ್ಲಿ ಭ್ರಷ್ಟಾಚಾರದ ವಿರುದ್ಧ ಹೋರಾಡಿದ ರಾಷ್ಟ್ರೀಯ ಅಧ್ಯಕ್ಷ ಡಾ. ರಾಜೇಶ್ ಶುಕ್ಲ ಅವರು 2012ರಲ್ಲಿ ಸಮಿತಿ ಸ್ಥಾಪನೆ ಮಾಡಿದ್ದಾರೆ ಎಂದರು.

ರಾಷ್ಟ್ರೀಯ ಭ್ರಷ್ಟಾಚಾರ ನಿರ್ಮೂಲನ ಹಾಗೂ ಕಾಯಾಚರಣೆ ಸಮಿತಿ ಅಧ್ಯಕ್ಷರಾಗಿ ಎನ್.ಎಸ್.ಮಂಜುನಾಥ, ಪ್ರಧಾನ ಕಾರ್ಯದರ್ಶಿಯಾಗಿ ಎ.ಎಂ.ಜಯರಾಮ್, ಖಜಾಂಚಿ ಸ್ಥಾನಕ್ಕೆ ಎಸ್.ಎಂ.ಪುಷ್ಪ, ಯಶೋಧ ಕಾರ್ಯಧ್ಯಕ್ಷೆ, ಉಪಾಧ್ಯಕ್ಷರಾಗಿ ಬಿ. ರಾಘವೇಂದ್ರ, ಎನ್. ಜೆ.ಸೋಮನಾಥ, ಡಿ.ಕೆ.ಮಧು, ಜಂಟಿ ಕಾರ್ಯದರ್ಶಿಯಾಗಿ ಕೆ.ಎಸ್. ವೇದ, ಬಿ.ಎಲ್.ಅರುಣ್ ಕುಮಾರ್, ಸಂಘಟನಾ ಕಾರ್ಯದರ್ಶಿಯಾಗಿ ಎನ್.ಭಗವಾನ್, ಸಿ.ಎಲ್.ಮಹದೇವ, ಸಾಂಸ್ಕೃತಿಕ ಕಾರ್ಯದರ್ಶಿಯಾಗಿ ಸಿ.ಎಂ.ಸರಸ್ವತಿ, ಕಾರ್ಯದರ್ಶಿಯಾಗಿ ಹೆಚ್.ವಿ.ಸಿದ್ದೇಶ್ ಅಧಿಕಾರ ವಹಿಸಿಕೊಂಡರು.

ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ದಯಾನಂದ್, ಶ್ರೀಶೈಲ ಕುಂಬಾರ, ವಿಭಾಗಿಯ ಅಧ್ಯಕ್ಷ ಎಸ್. ಗುರುಸ್ವಾಮಿ, ಮಾಧ್ಯಮ ಕಾರ್ಯದರ್ಶಿ ಪ್ರಸನ್ನ ಕುಮಾರ್, ಜಿಲ್ಲಾಧ್ಯಕ್ಷ ಟಿ.ಮಲ್ಲೇಶ್, ಕೆ.ಎಂ.ಪುಷ್ಪಾವತಿ ಮತ್ತಿತರರಿದ್ದರು.

# ಆಧುನಿಕತೆ ಬೆಳೆದಂತೆ ಜಾನಪದ ಅಳಿವಿಗೆ: ಮಲ್ಲೇಶಗೌಡ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಪ್ರಸ್ತುತ ದಿನಮಾನಗಳಲ್ಲಿ ಹಳ್ಳಿಗಳು ಪಟ್ಟಣವಾಗಿ ಬದಲಾಗುತ್ತಿದ್ದು, ಅದರಿಂದ ನಮ್ಮ ಜಾನಪದ ಕಲೆ ನಶಿಸಿ ಹೋಗುತ್ತಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಎಚ್. ಎಲ್. ಮಲ್ಲೇಶಗೌಡ ಹೇಳಿದರು.

ತಾಲೂಕಿನ ಕೊಮ್ಮೆನಹಳ್ಳಿ ಗ್ರಾಮದಲ್ಲಿ ನಗರದ ಬೆಸ್ಟ್ ಪ್ರಥಮ ದರ್ಜೆ ಕಾಲೇಜು ವತಿಯಿಂದ ಹಮ್ಮಿಕೊಂಡಿರುವ ಎನ್‌ಎಸ್‌ಎಸ್ ವಾರ್ಷಿಕ ಶಿಬಿರದಲ್ಲಿ ಮಾತನಾಡಿ, ನಮ್ಮ ಪೂರ್ವಜರು ನಮಗೆ ಕಟ್ಟಿಕೊಟ್ಟ ಕಲೆ, ಸಂಸ್ಕೃತಿ, ಆಚಾರ ವಿಚಾರಗಳು ನಶಿಸಿ ಹೋಗುತ್ತಿವೆ. ಗ್ರಾಮೀಣ ಭಾಗದಲ್ಲಿನ ಹಳ್ಳಿಗಳಲ್ಲಿ ಪಟ್ಟಣದ ಆಚಾರ ವಿಚಾರ ಬರಲು ಆರಂಭವಾಗಿದೆ. ಆಧುನಿಕವಾಗಿ ಹಿಂದೆ ಇದ್ದ ವೇಳೆ ಮನುಷ್ಯ ನೆಮ್ಮದಿಯಾಗಿ ಶಾಂತಿಯುತವಾಗಿ ಬದುಕುತ್ತಿದ್ದ. ಆದರೆ ಆಧುನಿಕತೆ ಇಂದು ಎಲ್ಲಾ ರಂಗಗಳಲ್ಲೂ ಬಂದಿದೆ. ಆದರೆ ಮನುಷ್ಯನಿಗೆ ನೆಮ್ಮದಿ, ಶಾಂತಿ ಎಂಬುದು ಇಲ್ಲ. ಪೂರ್ವಜರು ತಮ್ಮ ಕೆಲಸದಲ್ಲಿ ನೆಮ್ಮದಿ ಕಂಡುಕೊಳ್ಳುತ್ತಿದ್ದರು. ಆದರೆ ಇಂದು ನಾವು ಕೆಲಸವನ್ನು ಮಾಡದೆ ಕೆಲಸ ಕದಿಯುವಲ್ಲಿ ನೆಮ್ಮದಿ ಕಾಣಲು ಹೊರಟಿದ್ದೇವೆ. ನಮ್ಮ ಹಿಂದಿನ ಜಾನಪದರು ನಮಗೆ ಹಲವು ಒಳ್ಳೆಯ ಆಚಾರ ವಿಚಾರಗಳನ್ನು ಬಿಟ್ಟು ಹೋಗಿದ್ದಾರೆ. ಅವುಗಳನ್ನು ಉಳಿಸಿ ಬೆಳೆಸುವ ಕೆಲಸ ಆಗಬೇಕಿದೆ. ಯುವ ಪೀಳಿಗೆ ಕೇವಲ ವಿದ್ಯಾವಂತರಾದರೆ ಸಾಲದು ನಮ್ಮ ಪೂರ್ವಜರು ನಮ್ಮ ಕಟ್ಟಿಕೊಟ್ಟಿರುವ ಕಲೆ, ಸಂಸ್ಕೃತಿಯನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಜೀವನದಲ್ಲಿ ಮಾನವೀಯ ಗುಣಗಳನ್ನು ಬೆಳೆಸಿಕೊಂಡು ಸಮಾಜದಲ್ಲಿ ಉತ್ತಮ ವ್ಯಕ್ತಿಗಳಾಗುವುದರೊಂದಿಗೆ ಉತ್ತಮ ಸಮಾಜವನ್ನು ನಿರ್ಮಾಣ ಮಾಡುವಲ್ಲಿ ಶ್ರಮಿಸಬೇಕಿದೆ ಎಂದು ಹೇಳಿದರು.

ಹಾಸನ ವಿಶ್ವವಿದ್ಯಾಲಯದ ಕುಲಸಚಿವ (ಪರೀಕ್ಷಾಂಗ) ನಾಗರಾಜು ಮಾತನಾಡಿ, ಮಕ್ಕಳಿಗೆ ನಾಲ್ಕು ಗೋಡೆಗಳ ನಡುವಿನ ಶಿಕ್ಷಣಕ್ಕಿಂತ ಜೀವನದ ವಾಸ್ತವದಲ್ಲಿ ನಡೆಯುವ ಸಂಗತಿಗಳನ್ನು ತಿಳಿಸಿ ಶಿಕ್ಷಣ ಹೇಳಿಕೊಡುವುದು ಅಗತ್ಯ. ಅಬ್ದುಲ್ ಕಲಾಂ, ಸರ್. ಎಂ. ವಿಶ್ವೇಶ್ವರಯ್ಯ ಅವರಂತಹ ಮಹಾನ್ ವ್ಯಕ್ತಿಗಳನ್ನು ಯುವಕರು ಸ್ಫೂರ್ತಿಯಾಗಿ ತೆಗೆದುಕೊಳ್ಳಬೇಕು.

ನಮ್ಮ ಹಿಂದಿನ ಕಲೆ, ಸಂಸ್ಕೃತಿ, ಮಾನವೀಯ ಮೌಲ್ಯಗಳನ್ನು ಇಂದಿನ ಮಕ್ಕಳಿಗೆ ತಿಳಿಸಿಕೊಡಬೇಕು. ಮೊಬೈಲ್ ಬಳಕೆಯಿಂದ ಇಂದಿನ ಮಕ್ಕಳನ್ನು ಹೊರತರುವುದು ಎಲ್ಲರಿಗೂ ಕಷ್ಟಕರವಾಗಿದೆ. ವಿದ್ಯಾರ್ಥಿಗಳು ತಮ್ಮ 21 ವರ್ಷದ ವರೆಗೂ ಅಹಿಂಸ ತತ್ವವನ್ನು ಪಾಲನೆ ಮಾಡಬೇಕು. ಶಾಂತಿ ಪಾಲನೆಯಿಂದ ಜೀವನದಲ್ಲಿ ಸಾಧನೆ ಮಾಡಲು ಸಾಧ್ಯ. ಹಾಗಾಗಿ ಓದುವ ವಯಸ್ಸಿನಲ್ಲಿ ಗುರು ಹಿರಿಯರನ್ನು ಗೌರವಿಸುವ ಗುಣ ಬೆಳೆಸಿಕೊಂಡು ಉತ್ತಮ ವ್ಯಕ್ತಿಗಳಾಗಬೇಕು ಎಂದರು.

ಹಾಸನದ ಬಿಜಿಎಸ್ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಸಿ.ಎಸ್. ಮೋಹನ್ ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ಕನಸಿನ ಕೂಸು ರಾಷ್ಟ್ರೀಯ ಸೇವಾ ಯೋಜನೆ ಇದಾಗಿದ್ದು, 35 ಲಕ್ಷ ಶಿಬಿರಾರ್ಥಿಗಳು ಇದ್ದಾರೆ. ಮೈಸೂರು-ಹಾಸನ 148 ಕಾಲೇಜುಗಳಲ್ಲಿ 19 ಸಾವಿರ ವಿದ್ಯಾರ್ಥಿಗಳು ಇದ್ದಾರೆ. ವ್ಯಕ್ತಿತ್ವದ ವಿಕಾಸಕ್ಕೆ ಹಾಗೂ ಯುವಕರನ್ನು ಸನ್ಮಾರ್ಗದಲ್ಲಿ ನಡೆಯುವಂತೆ ಮಾಡುತ್ತದೆ ಎಂದು ಹೇಳಿದರು.

ಹಾಸನ ಹಾಲು ಒಕ್ಕೂಟದ ಹಣಕಾಸು ವಿಭಾಗದ ವ್ಯವಸ್ಥಾಪಕಿ ಸೌಜನ್ಯ, ಹೊಳೆನರಸೀಪುರ ಪ್ರಥಮ ದರ್ಜೆ ಕಾಲೇಜು ಸಹ ಪ್ರಾಧ್ಯಾಪಕ ಡಾ.ಎಚ್.ಎನ್. ಹರೀಶ್, ಮಹಿಳಾ ಕಾಲೇಜು ಸಹ ಪ್ರಾಧ್ಯಾಪಕ ಬಿ.ಪಿ. ಜಗದೀಶ್, ಬೆಸ್ಟ್ ಪ್ರಥಮ ದರ್ಜೆ ಕಾಲೇಜು ಆಡಳಿತಾಧಿಕಾರಿಗಳಾದ ಡಾ. ವಿಕ್ರಂ, ಡಾ. ನಿತ್ಯಾನಂದ, ಪ್ರಾಂಶುಪಾಲ ಕೆ.ಸಿ. ನವೀನ್, ಉಪ ಪ್ರಾಂಶುಪಾಲ ಸಚಿನ್, ಮಾಧ್ಯಮ ಸಲಹೆಗಾರ ಎಚ್.ಕೆ.ದಿಲೀಪ್ ಕುಮಾರ್, ಅಧ್ಯಾಪಕರಾದ ಗಗನ್, ಕಚೇರಿ ಸಿಬ್ಬಂದಿ ಶರತ್, ಬೆಸ್ಟ್ ಪಿಯು ಕಾಲೇಜು ಪ್ರಾಂಶುಪಾಲ ಮಧು ಹಾಗೂ ಇತರರು ಹಾಜರಿದ್ದರು.

# ಹಾಡ ಹಗಲೇ ಮನೆಗೆ ನುಗ್ಗಿ ಕಳ್ಳತನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಡ ಹಗಲೇ ಮನೆ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು ನಗದು ಸೇರಿ 7 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳವು ಮಾಡಿದ್ದಾರೆ.

ತಾಲ್ಲೂಕಿನ ಕಂಚಮಾರನಹಳ್ಳಿ ಗ್ರಾಮದ ಕೆ.ಆರ್.ಭಾರತಿ ಎಂಬುವವರ ಮನೆಯಲ್ಲಿ ಕಳ್ಳತನ ನಡೆದಿದೆ. ಶುಕ್ರವಾರ ಬೆಳಿಗ್ಗೆ 10.30ಕ್ಕೆ ಬೀಗ ಹಾಕಿ ಅಂಗನವಾಡಿ ಕೆಲಸಕ್ಕೆಂದು ಹೋಗಿದ್ದ ಅವರು ಸಂಜೆ 4 ಗಂಟೆಗೆ ವಾಪಸ್ ಬಂದಾಗ ಕಳ್ಳತನವಾಗಿರುವುದು ತಿಳಿದಿದೆ. ಬೀಗ ಮುರಿದು ಒಳಪ್ರವೇಶಿಸಿರುವ ಕಳ್ಳರು ಬೀರುವಿನ ಬೀಗ ಮುರಿದಿದ್ದಾರೆ. ಮನೆ ಹಾಗೂ ಜಮೀನು ಕಾಗದ ಪತ್ರಗಳು, 45 ಗ್ರಾಂ ತೂಕದ ಚಿನ್ನದ ತುಳಸಿ ಹಾರ ಮತ್ತು 10 ಸಾವಿರ ರೂ. ಕದ್ದಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇತಿಹಾಸದಲ್ಲಿ ಈ ದಿನ

## ಮಾರ್ಚ್-01

1872: ಯೆಲ್ಲೋಸ್ಟೋನ್ ರಾಷ್ಟ್ರೀಯ ಉದ್ಯಾನವನ ಅನ್ನು ಅಮೆರಿಕದ ಮೊದಲ ರಾಷ್ಟ್ರೀಯ ಉದ್ಯಾನವನವಾಗಿ ಘೋಷಿಸಲಾಯಿತು.

1954: ಅಮೆರಿಕವು ಮಾರ್ಷಲ್ ದ್ವೀಪಗಳಲ್ಲಿ ಕ್ಯಾಸಲ್ ಬ್ರಾವೋ ಅಣು ಪರೀಕ್ಷೆ ನಡೆಸಿತು.

1966: ಸ್ಟಾರ್ ಟ್ರೆಕ್ ಧಾರಾವಾಹಿ ಮೊದಲ ಬಾರಿ ಪ್ರಸಾರವಾಯಿತು.

### ಜನನ

1904: ಗ್ಲೆನ್ ಮಿಲ್ಲರ್, ಅಮೆರಿಕದ ಪ್ರಸಿದ್ಧ ಜಾಜ್ ಸಂಗೀತಗಾರ

1927: ಹ್ಯಾರಿ ಬೆಲಾಫೋಂಟೆ, ಗಾಯಕ ಮತ್ತು ಸಾಮಾಜಿಕ ಹೋರಾಟಗಾರ

1954: ರಾನ್ ಹಾವರ್ಡ್, ಹಾಲಿವುಡ್ ಚಿತ್ರ ನಿರ್ದೇಶಕ

### ಮರಣ

1974: ಚಾರ್ಲ್ಸ್ ಲಿಂಡ್‌ಬರ್ಗ್, ಅಟ್ಲಾಂಟಿಕ್ ಸಮುದ್ರವನ್ನು ಏಕಾಂಗಿಯಾಗಿ ದಾಟಿದ ಪ್ರಸಿದ್ಧ ವಿಮಾನ ಚಾಲಕ

# ವಿಜ್ಞಾನದಿಂದಲೇ ಪ್ರಪಂಚದ ಅಭಿವೃದ್ಧಿ ಸಾಧ್ಯ: ಚಿನ್ನೇನಹಳ್ಳಿ ಸ್ವಾಮಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಪ್ರತಿ ಘಟನೆ ಮತ್ತು ಉತ್ಪಾದನೆಯ ಹಿಂದೆಯೂ ವೈಜ್ಞಾನಿಕ ಕಾರಣಗಳಿರುತ್ತವೆ. ಹಾಗಾಗಿ ವಿಜ್ಞಾನದಿಂದ ಮಾತ್ರ ಈ ಜಗತ್ತು ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಭಾರತ ಜ್ಞಾನ ವಿಜ್ಞಾನ ಸಮಿತಿಯ (ಬಿಜಿವಿಎಸ್) ಜಿಲ್ಲಾ ಕಾರ್ಯದರ್ಶಿ ಚಿನ್ನೇನಹಳ್ಳಿ ಸ್ವಾಮಿ ಅಭಿಪ್ರಾಯಪಟ್ಟರು.

ಇಲ್ಲಿನ ಸರ್ಕಾರಿ ಪ್ರೌಢ ಶಾಲೆಯಲ್ಲಿ ಬಿಜಿವಿಎಸ್ ಹಾಗೂ ಶಾಲೆಯ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಟರಾಷ್ಟ್ರೀಯ ವಿಜ್ಞಾನ ದಿನಾಚರಣೆಟಯಲ್ಲಿ ಉಪನ್ಯಾಸ ನೀಡಿದರು.

ಸಂವಿಧಾನದ ಆಶಯದಂತೆ ಪ್ರತಿಯೊಬ್ಬರೂ ವೈಜ್ಞಾನಿಕ ಮನೋಭಾವವನ್ನು ಬೆಳೆಸಿಕೊಳ್ಳುವುದು ಹಾಗೂ ಇತರರಿಗೆ ಪ್ರೇರೇಪಿಸುವುದು ನಮ್ಮ ಕರ್ತವ್ಯ. ವಿದ್ಯಾರ್ಥಿಗಳು ಯಾವುದನ್ನೂ ಕುರುಡಾಗಿ ನಂಬದೆ, ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ನಮಗೆ ಸಂಸ್ಕೃತಿ ಮತ್ತು ಸಂಪ್ರದಾಯಗಳು ಬೇಕು. ಮೌಢ್ಯತೆ ಬೇಡ ಎಂದು ಕಿವಿಮಾತು ಹೇಳಿದರು.

ಮೊದಲು ನಿಮ್ಮನ್ನು ನೀವು ನಂಬಿ, ಪೋಷಕರ ಮೇಲೆ ಸಂಪೂರ್ಣ ಅವಲಂಬಿತರಾಗದೆ ಬದುಕಲು ಕಲಿಯಿರಿ. ಬಸವಣ್ಣನವರ ಟಕಾಯಕವೇ ಕೈಲಾಸಟ ತತ್ವವನ್ನು ಅಳವಡಿಸಿಕೊಳ್ಳಿ. ಪ್ರಕೃತಿ ನಮಗೆ ನೀಡಿರುವ ಸಂಪನ್ಮೂಲಗಳನ್ನು ಮುಂದಿನ ಪೀಳಿಗೆಗೆ ಉಳಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಚಿಂತಿಸಬೇಕು ಎಂದು ಸಲಹೆ ನೀಡಿದರು.

## ಪ್ಲಾಸ್ಟಿಕ್ ತ್ಯಾಜ್ಯದಿಂದ ಇಟ್ಟಿಗೆ ತಯಾರಿಕೆ

ಇದೇ ಸಂದರ್ಭದಲ್ಲಿ ಶಾಲೆಯ ಇಕೋ ಕ್ಲಬ್ ವತಿಯಿಂದ ನಡೆದ ಟಕಸದಿಂದ ರಸಟ ಕಾರ್ಯಕ್ರಮದಲ್ಲಿ ಬಿಜಿವಿಎಸ್ ಜಿಲ್ಲಾ ಪ್ರಕಟಣಾ ಸಮಿತಿ ಸಂಚಾಲಕಿ ಮೋನಿಕಾ ಅವರು ವಿದ್ಯಾರ್ಥಿಗಳಿಗೆ ಪರಿಸರ ಸಂರಕ್ಷಣೆಯ ಬಗ್ಗೆ ಅರಿವು ಮೂಡಿಸಿದರು.

ಭೂಮಿಯ ಮೇಲಿನ ಪರಿಸರ ನಾಶಕ್ಕೆ ನಾವು ಎಲ್ಲೆಂದರಲ್ಲಿ ಎಸೆಯುವ ಕಸವೇ ಮೂಲ ಕಾರಣ. ಇಂದು ನಮ್ಮ ಜೀವನದ ಅವಿಭಾಜ್ಯ ಅಂಗವಾಗಿರುವ ಪ್ಲಾಸ್ಟಿಕ್ ತ್ಯಾಜ್ಯಗಳನ್ನು ಸರಿಯಾಗಿ ವಿಲೇವಾರಿ ಮಾಡದ ಕಾರಣ, ಅವು ಮಣ್ಣು ಸೇರಿ ಮೈಕ್ರೋ ಪ್ಲಾಸ್ಟಿಕ್ ಆಗಿ ಪರಿವರ್ತನೆಗೊಂಡು, ಮತ್ತೆ ಮನುಷ್ಯನ ದೇಹ ಸೇರಿ ಕ್ಯಾನ್ಸರ್ ನಂತಹ ಮಾರಕ ರೋಗಗಳಿಗೆ ಕಾರಣವಾಗುತ್ತಿವೆ. ಒಂದು ಚಿಕ್ಕ ಪ್ಲಾಸ್ಟಿಕ್ ತುಂಡು ಕೂಡ ಭೂಮಿಗೆ ಸೇರದಂತೆ ತಡೆಯುವುದು ನಾವು ಸಮಾಜಕ್ಕೆ ಕೊಡುವ ಅತಿದೊಡ್ಡ ಕೊಡುಗೆಯಾಗಿದೆ. ಕಸವನ್ನು ರಸವನ್ನಾಗಿ ಮಾಡುವ ಕಲೆಯನ್ನು ಪ್ರತಿಯೊಬ್ಬರೂ ರೂಢಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ತ್ಯಾಜ್ಯ ಪ್ಲಾಸ್ಟಿಕ್ ಬಳಸಿ ಅಲಂಕಾರಿಕ ಇಟ್ಟಿಗೆಗಳನ್ನು ತಯಾರಿಸುವ ಕುತೂಹಲಕಾರಿ ಪ್ರಾತ್ಯಕ್ಷಿಕೆಯನ್ನು ಮೋನಿಕಾ ಅವರು ವಿದ್ಯಾರ್ಥಿಗಳಿಗೆ ಮಾಡಿ ತೋರಿಸಿದರು. ಪ್ರೌಢಶಾಲೆಯ ವಿಜ್ಞಾನ ಶಿಕ್ಷಕಿ ಆಶಾ ಕಿರಣ್ ಸೇರಿದಂತೆ ಶಾಲೆಯ ಇತರ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡಿದ್ದರು.

# ಆಕಾಶವಾಣಿ ಕೇಂದ್ರಕ್ಕೆ ಪತ್ರಿಕೋದ್ಯಮ ವಿದ್ಯಾರ್ಥಿಗಳ ಭೇಟಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಆರ್.ಸಿ. ರಸ್ತೆ ಗಂಧದ ಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವತಿಯಿಂದ ಅಂತಿಮ ವರ್ಷದ ವಿದ್ಯಾರ್ಥಿಗಳ ಪ್ರಾಯೋಗಿಕ ಕಲಿಕೆಯ ಭಾಗವಾಗಿ ಆಕಾಶವಾಣಿ ಕೇಂದ್ರಕ್ಕೆ ಭೇಟಿ ನೀಡಿದ್ದರು.

ಆಕಾಶವಾಣಿ ಕೇಂದ್ರದಲ್ಲಿ ವಿಶೇಷವಾಗಿ ಆಯೋಜಿಸಲಾಗಿದ್ದ ಕೃತಕ ಬುದ್ಧಿಮತ್ತೆ ಹಾಗೂ ಕೃಷಿ ಅಭಿವೃದ್ಧಿ ವಿಚಾರದ ಕುರಿತ ನೇರ ಪ್ರಸಾರ ಕಾರ್ಯಕ್ರಮದಲ್ಲಿ ಪತ್ರಿಕೋದ್ಯಮ ವಿದ್ಯಾರ್ಥಿನಿಯರು ಕಾರ್ಯಕ್ರಮ ನಿರ್ವಹಣೆ ಹಾಗೂ ತಾಂತ್ರಿಕ ಕೆಲಸ ಕಾರ್ಯಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಅಲ್ಲದೆ ಕಾರ್ಯಕ್ರಮದ ಸುದ್ದಿ ವರದಿ ತಯಾರಿಕೆ ಮಾಡಿದ ವಿದ್ಯಾರ್ಥಿಗಳು ಆಕಾಶವಾಣಿ ಕಾರ್ಯಕ್ರಮ ಸಂಯೋಜಕ ಅರಕಲಗೂಡು ಮಧುಸೂದನ್ ಅವರಿಗೆ ವರದಿ ಸಿದ್ದಪಡಿಸಿಕೊಟ್ಟರು. ಕಲಿಕೆಯ ಭಾಗವಾಗಿ ಆಕಾಶವಾಣಿ ಕೇಂದ್ರಕ್ಕೆ ಭೇಟಿ ನೀಡಿದ್ದ ವಿದ್ಯಾರ್ಥಿಗಳು ಪ್ರಾಯೋಗಿಕವಾಗಿ ಮಾಹಿತಿ ಪಡೆದರು.

ಕಾಲೇಜಿನ ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಅವರು ಕಾಲೇಜಿನ ಪತ್ರಿಕೋದ್ಯಮ ವಿದ್ಯಾರ್ಥಿಗಳು ಸಕ್ರಿಯವಾಗಿ ಒಂದಿಲ್ಲೊಂದು ಉತ್ತಮ ಗುಣಮಟ್ಟದ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ಶೈಕ್ಷಣಿಕವಾಗಿ ಬೆಳೆಯುತ್ತಿದ್ದಾರೆ. ವಿದ್ಯಾರ್ಥಿಗಳಿಗೆ ಭವಿಷ್ಯದ ದೃಷ್ಟಿಯಿಂದ ಇಂತಹ ಕಾರ್ಯಕ್ರಮ ಪ್ರಯೋಜನವಾಗಲಿದ್ದು, ವಿದ್ಯಾರ್ಥಿನಿಯರು ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಪತ್ರಿಕೋದ್ಯಮ ವಿಭಾಗದ ಉಪನ್ಯಾಸಕ ಹೆಚ್.ಕೆ.ದಿಲೀಪ್ ಕುಮಾರ್ ಮಾರ್ಗದರ್ಶನದಲ್ಲಿ ಆಕಾಶವಾಣಿ ಕೇಂದ್ರ ಭೇಟಿ ಮಾಡಲಾಗಿತ್ತು.




Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248